ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸಮಾಚಾರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 9/1/21

# ಎಚ್.ವಿಶ್ವನಾಥ್, ಸಂಕನೂರು ರಾಜೀನಾಮೆ

9/1/21

**ಬೆಂಗಳೂರು:** ವಿಧಾನ ಪರಿಷತ್ತಿನ ಗಲಾಟೆ ಕುರಿತು ತನಿಖೆ ನಡೆಸಲು ರಚನೆಯಾಗಿದ್ದ ಸದನ ಸಮಿತಿಗೆ ಬಿಜೆಪಿ ಸದಸ್ಯರಾದ ಎಚ್.ವಿಶ್ವನಾಥ್ ಹಾಗೂ ಎಸ್.ವಿ. ಸಂಕನೂರು ರಾಜೀನಾಮೆ ಸಲ್ಲಿಸಿದ್ದಾರೆ.



ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಎಚ್.ವಿಶ್ವನಾಥ್, ಪರಿಷತ್ ಗಲಾಟೆ ಪ್ರಕರಣ ಎಲ್ಲರೂ ತಲೆ ತಗ್ಗಿಸುವಂತೆ ಮಾಡಿದೆ. ಈ ಸದನ ಸಮಿತಿಯಿಂದ ಯಾವುದೇ ರೀತಿಯ ಸತ್ಯ ಹೊರಬರಲು ಸಾಧ್ಯವಿಲ್ಲ. ಸದನ ಸಮಿತಿ ಏಕ ಪಕ್ಷೀಯವಾಗಿ ಆಗಬಾರದು. ಸದನ ಸಮಿತಿ ರಚಿಸುವ ಮುಂಚೆ ಸಭಾಪತಿಗಳು ಮೂರು ಪಕ್ಷಗಳ ನಾಯಕರ ಜೊತೆ ಚರ್ಚಿಸಿ ರಚನೆ ಮಾಡಿದ್ದರೆ ಒಳ್ಳೆಯದಿತ್ತು ಎಂದು ಹೇಳಿದರು.

ಈ ಬಗ್ಗೆ ರಾಷ್ಟ್ರಮಟ್ಟದ ಉನ್ನತ ತನಿಖೆ ನಡೆಸಬೇಕು. ಈ ಪ್ರಕರಣದಲ್ಲಿ ಉಪ ಸಭಾಪತಿಯಾಗಿದ್ದ ಧರ್ಮೇಗೌಡರ ಆತ್ಮಹತ್ಯೆಯೂಸೇರಿಕೊಂಡಿರುವುದರಿಂದ ಉನ್ನತ ಮಟ್ಟದ ತನಿಖೆ ನಡೆಸುವ ಅಗತ್ಯವಿದೆ ಎಂದು ಹೇಳಿದರು.